ಕನ್ನಡ ಪೋಸ್ಟ್
KANNADA POST
ಇದು ಸುದ್ದಿ ವಿಳಾಸ
ಸಂಪಾದಕ : ಮಂಜು ಬನವಾಸೆ
ಕನ್ನಡ ದಿನಪತ್ರಿಕೆ
ಹಾಸನ | E-mail : kannadapostnews@gmail.com | / ಕನ್ನಡ post | Price: ₹1
Vol.No.02 | Issue. 109 | Pages. 2 | Date: 01-04-2026, WEDNESDAY RNI NO: KARKAN/2024/89601 Kannada Daily
ಸಂಪುಟ : 02 - ಸಂಚಿಕೆ : 109 - ಪುಟಗಳು : 2 01-04-2026 ಬುಧವಾರ Ph: 8762954248 ದರ : ₹1

# ಬೆಟ್ಟದ ಭೈರವೇಶ್ವರ: ಪಾವಿತ್ರ್ಯತೆ ರಕ್ಷಣೆ ಭರವಸೆ

## ಗ್ರಾಮಸ್ಥರೊಂದಿಗೆ ಜಿಲ್ಲಾಧಿಕಾರಿ ಸಭೆ | ಅಹವಾಲು ಸ್ವೀಕಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಬೆಟ್ಟದ ಭೈರವೇಶ್ವರ ದೇವಸ್ಥಾನ ಆವರಣದಲ್ಲಿ ಇತ್ತೀಚೆಗೆ ಛಾಯಾಗ್ರಾಹಕರು ಹಾಗೂ ಗ್ರಾಮಸ್ಥರ ನಡುವೆ ನಡೆದ ಗಲಾಟೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಮಂಗಳವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಗ್ರಾಮಸ್ಥರು ಹಾಗೂ ಸ್ಥಳೀಯ ಮುಖಂಡರ ಅಹವಾಲು ಆಲಿಸಿದ ಜಿಲ್ಲಾಧಿಕಾರಿ, ಪ್ರವಾಸೋದ್ಯಮದ ಹೆಸರಿನಲ್ಲಿ ಆಗಮಿಸುವ ಕೆಲ ಪ್ರವಾಸಿಗರ ಬೇಜವಾಬ್ದಾರಿತನ ಮತ್ತು ಸ್ಥಳೀಯ ಸಂಸ್ಕೃತಿಗೆ ಧಕ್ಕೆ ತರುವ ವರ್ತನೆಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಸಕಲೇಶಪುರ ತಾಲೂಕು ಪ್ರವಾಸಿಗರ ನೆಚ್ಚಿನ ತಾಣವಾಗಿದ್ದು, ಇಲ್ಲಿನ ನಿಸರ್ಗ ಹಾಗೂ ಧಾರ್ಮಿಕ ಕೇಂದ್ರಗಳನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿ. ಆದರೆ ಇತ್ತೀಚಿನ ದಿನಗಳಲ್ಲಿ ಪ್ಲಾಸ್ಟಿಕ್ ಬಾಟಲಿಗಳು, ಕವರ್‌ಗಳು ಹಾಗೂ ಮದ್ಯದ ಬಾಟಲಿಗಳನ್ನು ಎಸೆಯುವ ಮೂಲಕ ಪರಿಸರ ಮಾಲಿನ್ಯ ಹೆಚ್ಚುತ್ತಿರುವುದು ವಿಷಾದನೀಯ ಎಂದರು.

ವಿದೇಶಗಳಲ್ಲಿ ಕಸ ಎಸೆಯಲು ಹೆದರುವವರು ಇಲ್ಲಿಗೆ ಬಂದಾಗ ಯಾವುದೇ ಭಯವಿಲ್ಲದೆ ವರ್ತಿಸುತ್ತಿರುವುದು ಬೇಸರದ ಸಂಗತಿ. ದೇವಸ್ಥಾನದ ಪಾವಿತ್ರ್ಯತೆ ಕಾಪಾಡಲು ಜಿಲ್ಲಾಡಳಿತ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು

ಗ್ರಾಮಸ್ಥರ ಮನವಿಗೆ ಸ್ಪಂದಿಸಿದ ಅವರು, ಮರಗುಂದ ಗ್ರಾಮದ ಗಡಿಯಲ್ಲಿ ಶೌಚಾಲಯ ನಿರ್ಮಾಣ, ಸಿಸಿಟಿವಿ ಅಳವಡಿಕೆ ಹಾಗೂ ಪ್ರವಾಸಿಗರಿಗೆ ಕಟ್ಟುನಿಟ್ಟಿನ ನಿಯಮಾವಳಿ ಜಾರಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಅಧಿಕಾರಿಗಳ ಕಚೇರಿಯಲ್ಲಿ ಫೋಟೋ ನೋಡಿದ ಕ್ಷಣದಲ್ಲೇ ಇಲ್ಲಿನ ಸೌಂದರ್ಯಕ್ಕೆ ಮಾರುಹೋಗಿದ್ದೆ. ಇಂತಹ ಪವಿತ್ರ ತಾಣದ ಸಂರಕ್ಷಣೆಗೆ



ಜಿಲ್ಲಾಡಳಿತ ಸದಾ ಬದ್ಧ ಎಂದು ಹೇಳಿದರು.

### ವಸ್ತ್ರ ಸಂಹಿತೆ ಜಾರಿಗೆ ಆಗ್ರಹ

ಮಾಜಿ ಶಾಸಕ ಹೆಚ್.ಎಂ. ವಿಶ್ವನಾಥ್ ಮಾತನಾಡಿ, ದೇವಸ್ಥಾನದ ಜೀರ್ಣೋದ್ಧಾರ ಹಾಗೂ ರಸ್ತೆ ಕಾಮಗಾರಿಗೆ ಸಂಬಂಧಿಸಿ ಗ್ರಾಮಸ್ಥರು ಈ ಹಿಂದೆ ಹೋರಾಟ ನಡೆಸಿ ಜೈಲು ಸೇರಿದ್ದ ಇತಿಹಾಸವಿದೆ. ಇದೀಗ ದೇವಸ್ಥಾನದ ಪಾವಿತ್ರ್ಯತೆ ಕಾಪಾಡಲು ಪ್ರಶ್ನಿಸಿದ ಸ್ಥಳೀಯರ ಮೇಲೆಯೇ ಸುಳ್ಳು ಪ್ರಕರಣ ದಾಖಲಿಸಿ ಬೇಡಿ ಹಾಕಿರುವುದು ಮಾನವ ಹಕ್ಕುಗಳ ಉಲ್ಲಂಘನೆ ಎಂದರು.

ಪ್ರವಾಸಿಗರು ಪ್ರಭಾವಿಗಳ ಮಕ್ಕಳೆಂದು ಹೆದರಿಸುವುದು, ಪಾದರಕ್ಷೆ ಧರಿಸಿ ದೇವಸ್ಥಾನದ ಗೋಡೆ ಏರುವುದು ಹಾಗೂ ಪ್ರಚೋದನಕಾರಿ ವರ್ತನೆ ತೋರುವುದು ಅಸ್ವೀಕಾರಾರ್ಹ. ಮಲೆನಾಡಿನ ಜನ ಅಹಿಂಸಾವಾದಿಗಳಾಗಿದ್ದು, ಪರಿಸ್ಥಿತಿ ಕೈಮೀರಿದಾಗ ಮಾತ್ರ ಇಂತಹ ಘಟನೆಗಳು ಸಂಭವಿಸುತ್ತವೆ ಎಂದು ಹೇಳಿದರು.

ಕೂಡಲೇ ದೇವಸ್ಥಾನದ ಸುತ್ತಲಿನ 5 ಎಕರೆ ಪ್ರದೇಶವನ್ನು ಮಂಜೂರು ಮಾಡಿ ಧಾರ್ಮಿಕ ಸೂಕ್ಷ್ಮ ಪ್ರದೇಶ ಎಂದು ಘೋಷಿಸಬೇಕು. ಅಲ್ಲದೆ 9 ಹಳ್ಳಿಗಳನ್ನು ಒಳಗೊಂಡ ಅಧಿಕೃತ ಸಮಿತಿ ರಚಿಸಿ ದೇವಸ್ಥಾನದ ಉಸ್ತುವಾರಿ ನೀಡಬೇಕು ಹಾಗೂ ಭಕ್ತರಿಗೆ ಕಟ್ಟುನಿಟ್ಟಿನ ವಸ್ತ್ರಸಂಹಿತೆ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಸಾಮಾಜಿಕ ಹೋರಾಟಗಾರ ಪೃಥ್ವಿ ಅವರೆಕಾಡು, ದೇವಲದ ಕೆರೆ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಪೂರ್ಣೇಶ್, ಕನಚೂರು ವಿನೋದ್, ಪಟ್ಟದೂರು ಪುಟ್ಟಣ್ಣ, ಬ್ರಿಜೇಶ್, ಸಂತೋಷ್ ಮೇಕನಗದ್ದೆ, ದೀಪಕ್ ದೊಡ್ಡಯ್ಯ, ಕರವೇ ಮುಖಂಡ ಸಂಗ್ರಾಮ್ ಸೇರಿದಂತೆ ವಿವಿಧ ಪಕ್ಷಗಳ ಮುಖಂಡರು ಉಪಸ್ಥಿತರಿದ್ದರು.

### ಛಾಯಾಗ್ರಾಹಕರು ದಬ್ಬಾಳಿಕೆ ಮಾಡಿದರು

ಹಲ್ಲೆ ಆರೋಪಿ ಪ್ರಶಾಂತ್ ಅವರ ಪತ್ನಿ ಮೇಘ ಮಾತನಾಡಿ, ದೇವಸ್ಥಾನಕ್ಕೆ ನಾವು ಬಂದಾಗ ಪ್ರಿ-ವೆಡ್ಡಿಂಗ್ ಫೋಟೋ ಶೂಟ್ ನಡೆಸುತ್ತಿದ್ದ ತಂಡದವರು ಗರ್ಭಗುಡಿಯ ಗೋಡೆಯ ಮೇಲೆ ಕಾಲಿಟ್ಟಿದ್ದರು. ಅರ್ಚಕರು ಮತ್ತು ನಮ್ಮ ಕುಟುಂಬದವರು ಪ್ರಶ್ನಿಸಿದಾಗ ಇದೇನು ನಿಮ್ಮಪ್ಪನ ಜಾಗವೇ ಎಂದು ನಿಂದಿಸಿ ಜಗಳಕ್ಕೆ ಮುಂದಾದರು. ನಮ್ಮ ಮೇಲೆ ದೌರ್ಜನ್ಯ ನಡೆಸಿ ಬಂಗಾರದ ಸರ ಹಾಗೂ ಬ್ರೇಸ್ಲೆಟ್ ಕಿತ್ತುಕೊಂಡು ಹೋಗಿದ್ದಾರೆ. ಈಗ ತಂತ್ರಜ್ಞಾನ ಬಳಸಿ ಎಡಿಟ್ ಮಾಡಿದ ವಿಡಿಯೋಗಳನ್ನು ಹರಿಬಿಟ್ಟು ನಮ್ಮನ್ನೇ ಅಪರಾಧಿಗಳಂತೆ ಬಿಂಬಿಸುತ್ತಿದ್ದಾರೆ ಎಂದು ಆರೋಪಿಸಿದರು.

## ಕಾಡಾನೆ ದಾಳಿಯಿಂದ ಪಾರಾದ ಇಟಿಎಫ್ ಸಿಬ್ಬಂದಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ಮತ್ತೂರು ಗ್ರಾಮದಲ್ಲಿ ಎಲಿಫೆಂಟ್ ಟಾಸ್ಕ್ ಫೋರ್ಸ್ (ಇಟಿಎಫ್) ಸಿಬ್ಬಂದಿ ಕಾಡಾನೆ ದಾಳಿಯಿಂದ ಕೂದಲೆಳೆ ಅಂತರದಲ್ಲಿ ಪಾರಾಗಿದ್ದು, ಆನೆ ಆಕ್ರೋಶಕ್ಕೆ 2 ಬೈಕ್ ಜಖಂಗೊಂಡಿವೆ.

ಗ್ರಾಮದ ಸುತ್ತಲು ಕಳೆದ ರಾತ್ರಿ ಕಾಡಾನೆಗಳ ಸಂಚಾರ ಕಂಡುಬಂದಿತ್ತು. ಆನೆಗಳ ಚಲನವಲನ ಪತ್ತೆ ಮಾಡಿ ಗ್ರಾಮಸ್ಥರಿಗೆ ಎಚ್ಚರಿಕೆ ನೀಡಲು ಮಂಗಳವಾರ ಬೆಳಿಗ್ಗೆ 6 ಗಂಟೆಯ ವೇಳೆ ಸಿಬ್ಬಂದಿ ಪ್ರಸನ್ನ ಹಾಗೂಯುವರಾಜ್ ಅವರು ಹೊಂಡಾ ಡಿಯೋ ಮತ್ತು ಬೈಕ್‌ನಲ್ಲಿ ತೆರಳಿದ್ದರು.

ಈ ವೇಳೆ ದಾರಿಯಲ್ಲಿ ಸಾಗುತ್ತಿದ್ದಾಗ ಕಾಡಿನ ಮರೆಯಲ್ಲಿ ಅಡಗಿದ್ದ ಆನೆ ಏಕಾಏಕಿ ರಸ್ತೆಗೆ ನುಗ್ಗಿ ದಾಳಿ ಮಾಡಲು ಮುಂದಾಗಿದೆ. ಆನೆ ಸಮೀಪಕ್ಕೆ ಬಂದಿರುವುದನ್ನು ಗಮನಿಸಿದ ಸಿಬ್ಬಂದಿ ತಕ್ಷಣವೇ ವಾಹನಗಳನ್ನು ಅಲ್ಲೇ ಬಿಟ್ಟು ಜೀವ ಉಳಿಸಿಕೊಳ್ಳಲು ಓಡಿದ್ದಾರೆ.

ಸಿಬ್ಬಂದಿಯನ್ನು ಅಟ್ಟಿಸಿಕೊಂಡು ಹೋದ ಆನೆ ಬಳಿಕ ಅಲ್ಲೇ ಬಿದ್ದಿದ್ದ ಬೈಕ್ ಹಾಗು ಡಿಯೋ ವಾಹನಗಳನ್ನು ಕಾಲಿನಿಂದ ತುಳಿದು ಸಂಪೂರ್ಣವಾಗಿ ಜಖಂ ಮಾಡಿದೆ. ಪರಿಣಾಮ ವಾಹನಗಳು ಅಪ್ಪಚ್ಚಿಯಾಗಿದ್ದು, ಸ್ಥಳದಲ್ಲಿ ಆತಂಕ ಸೃಷ್ಟಿಯಾಗಿದೆ.

ಘಟನೆಯಿಂದ ಮತ್ತುರು ಗ್ರಾಮದ ಜನರು ಆತಂಕಕ್ಕೊಳಗಾಗಿದ್ದಾರೆ. ಪ್ರತಿದಿನ ಜೀವ ಕೈಯಲ್ಲಿ ಹಿಡಿದು ಓಡಾಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಮನೆಯಿಂದ ಹೊರಬರಲು ಭಯವಾಗುತ್ತಿದೆ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡಿದ್ದಾರೆ.

# ಬೇಲೂರು ಚನ್ನಕೇಶವ ಸ್ವಾಮಿ ಬ್ರಹ್ಮ ರಥೋತ್ಸವ ಸಂಪನ್ನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಶ್ರೀ ಚನ್ನಕೇಶವ ಸ್ವಾಮಿ ಬ್ರಹ್ಮ ರಥೋತ್ಸವ ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಬೆಳಿಗ್ಗೆ 11.5ರ ಮಿಥುನ ಲಗ್ನದಲ್ಲಿ ಆರಂಭಗೊಂಡ ದಿವ್ಯ ಬ್ರಹ್ಮ ರಥೋತ್ಸವವು ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಧಾರ್ಮಿಕ ದತ್ತಿ ಇಲಾಖೆ, ಹಾಸನ ಜಿಲ್ಲಾಡಳಿತ ಮತ್ತು ಬೇಲೂರು ತಾಲೂಕು ಆಡಳಿತ ಆದೇಶದ ಮೇರೆಗೆ ಪ್ರತಿ ವರ್ಷದಂತೆ ಶ್ರೀ ಚನ್ನಕೇಶವಸ್ವಾಮಿ ಅವರ ರಥೋತ್ಸವ ನಡೆಸಲು ಕಳೆದ 20 ದಿನಗಳಿಂದ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿತ್ತು.

ಇದೇ ಮಾ.23 ರಿಂದ ಆರಂಭಗೊಂಡು ಏಪ್ರಿಲ್ 5 ರವರೆಗೆ ವಿವಿಧ ಪೂಜಾ ಕೈಂಕರ್ಯ ನೆರವೇರಿಸಲು ತೀರ್ಮಾನಿಸಿ ಸಾಂಪ್ರದಾಯಿಕವಾಗಿ ನಿತ್ಯ ಬಗೆ ಬಗೆಯ ಉತ್ಸವಾರ್ಥಗಳನ್ನು ನೆರವೇರಿಸಿ ಬೆಳಗ್ಗೆ 11.5ರ ಗಳಿಗೆಯಲ್ಲಿ ಬ್ರಹ್ಮ ರಥೋತ್ಸವವು ದೇಶ-ವಿದೇಶ ಹಾಗೂ ರಾಜ್ಯ ಹೊರ ರಾಜ್ಯಗಳಿಂದ ಆಗಮಿಸಿದ್ದ ಸಹಸ್ರಾರು ಭಕ್ತಾದಿಗಳ ಸಮ್ಮುಖದಲ್ಲಿ ನೆರವೇರಿತು.

ರಥೋತ್ಸವ ನಡೆಯುವ ವೇಳೆ ತಾಲೂಕಿನ ಸುತ್ತಮುತ್ತಲ ಗ್ರಾಮಸ್ಥರು ರಾಜ್ಯ ಹೊರ ರಾಜ್ಯಗಳಿಂದ ಆಗಮಿಸಿದ್ದ ಭಕ್ತಾದಿಗಳು, ರಥಕ್ಕೆ ಧವನ-ಬಾಳೆಹಣ್ಣು ಎಸೆಯುವ ಮೂಲಕ ಭಕ್ತಿ ಮೆರೆದರು.

ಇದೇ ಸಂದರ್ಭ ಸಾರ್ವಜನಿಕರು, ದೇವಾಲಯದ ಮುಖ್ಯ ರಸ್ತೆ ಸೇರಿದಂತೆ ಇತರ ಸ್ಥಳಗಳಲ್ಲಿ ಬಗೆ ಬಗೆ ರೀತಿಯ ಪ್ರಸಾದ ಹಾಗೂ ತಂಪಾದ ಪಾನೀಯಗಳನ್ನು ಸ್ವಯಂ ಪ್ರೇರಿತವಾಗಿ ವಿತರಿಸಿದ್ದು ಕಂಡು ಬಂದಿತು.

ಮಾಜಿ ಸಚಿವ ಎಚ್.ಡಿ. ರೇವಣ್ಣ, ಶಾಸಕ ಎಚ್.ಕೆ ಸುರೇಶ್. ಮಾಜಿ ಸಚಿವ ಬಿ.ಶಿವರಾಂ ಮೊದಲಾದವರು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಪುರಸಭೆ ಅಧ್ಯಕ್ಷೆ ಉಷಾ ಸತೀಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತಾ, ರಾಮಾನುಜ ಸ್ವಾಮೀಜಿ. ತಹಸೀಲ್ದಾರ್ ಶ್ರೀಧರ್ ಕಂಕನವಾಡಿ, ಮಾಜಿ ಧರ್ಮದರ್ಶಿ ಯು.ಟಿ ಕೇಶವಮೂರ್ತಿ ದೇವಾಲಯದ ಕಾರ್ಯ ನಿರ್ವಹಣಾಧಿಕಾರಿ ಕೆ.ಎನ್.ಯೋಗೇಶ್, ಪುರಸಭೆ ಮಾಜಿ ಅಧ್ಯಕ್ಷರಾದ ಜಿ.ಶಾಂತಕುಮಾರ್, ಬಿ.ಗಿರೀಶ್, ಎ.ಆರ್. ಅಶೋಕ್, ಎಂ.ಆರ್. ವೆಂಕಟೇಶ್, ತೀರ್ಥ ಕುಮಾರಿ, ತೋಚ ಅನಂತ ಸುಬ್ಬರಾಯ, ಸದಸ್ಯರಾದ ಬಿ.ಸಿ ಜಗದೀಶ್, ಶೈಲೇಶ್, ಸೇರಿದಂತೆ ಇತರರು ಹಾಜರಿದ್ದರು.

# ಹಲ್ಲೆ ಖಂಡಿಸಿ ಛಾಯಾಗ್ರಾಹಕರ ಬೃಹತ್ ಪ್ರತಿಭಟನೆ

## ನಷ್ಟ ಭರಿಸಿಕೊಡುವಂತೆ ಆಗ್ರಹ | ಕಪ್ಪು ಪಟ್ಟಿ ಪ್ರದರ್ಶನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಕಲೇಶಪುರ ತಾಲೂಕಿನ ಬೆಟ್ಟದ ಭೈರವೇಶ್ವರ ದೇವಸ್ಥಾನ ಬಳಿ ಪ್ರೀ-ವೆಡ್ಡಿಂಗ್ ಛಾಯಾಚಿತ್ರ ಶೂಟಿಂಗ್ ನಡೆಸುವ ವೇಳೆ ವೃತ್ತಿಪರ ಛಾಯಾಗ್ರಾಹಕರ ಮೇಲೆ ಸ್ಥಳೀಯರು ಹಲ್ಲೆ ನಡೆಸಿರುವುದನ್ನು ಖಂಡಿಸಿ, ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಹಾಗೂ ಸೂಕ್ತ ಪರಿಹಾರಕ್ಕೆ ಒತ್ತಾಯಿಸಿ ರಾಜ್ಯ ಛಾಯಾಗ್ರಾಹಕರ ಸಂಘದಿಂದ ಮಂಗಳವಾರ ಬೃಹತ್ ಮೌನ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಭವನದಲ್ಲಿ ಸಭೆ ಸೇರಿ ನಂತರ ಮೌನ ಪ್ರತಿಭಟನೆ ಹೊರಟ ನೂರಾರು ಮಂದಿ ಛಾಯಾಗ್ರಾಹಕರು, ಹೇಮಾವತಿ ಪ್ರತಿಮೆ, ಎನ್.ಆರ್. ವೃತ್ತ ಹಾಗೂ ಬಿ.ಎಂ.ರಸ್ತೆ ಮೂಲಕ ಮೆರವಣಿಗೆಯಲ್ಲಿ ಸಾಗಿ ಜಿಲ್ಲಾಧಿಕಾರಿ ಕಚೇರಿ ಆವರಣಕ್ಕೆ ಆಗಮಿಸಿದರು.

ಸಂಘದ ರಾಜ್ಯಾಧ್ಯಕ್ಷ ಹೆಚ್.ಎಸ್. ನಾಗೇಶ್ ಮಾತನಾಡಿ, ಘಟನೆಯಲ್ಲಿ ಸುಮಾರು 5 ಲಕ್ಷ ರೂ.ಗಿಂತ ಹೆಚ್ಚು




ಮೌಲ್ಯದ ಕ್ಯಾಮೆರಾ ಹಾಗೂ ಇತರೆ ಛಾಯಾಚಿತ್ರೋಪಕರಣ ಹಾನಿಗೊಳಗಾಗಿದ್ದು ಅದಕ್ಕೆ ಪರಿಹಾರ ಕೊಡಿಸಬೇಕೆಂದು ಒತ್ತಾಯಿಸಿದರು.

ಅಲ್ಲದೆ ಛಾಯಾಗ್ರಾಹಕರು ದೈಹಿಕ ಹಾಗೂ ಮಾನಸಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಈ ಘಟನೆ ರಾಜ್ಯಾದ್ಯಂತ ಛಾಯಾಗ್ರಾಹಕರಲ್ಲಿ ಭೀತಿ ಮೂಡಿಸಿದೆ. ವೃತ್ತಿಪರರಿಗೆ ಸುರಕ್ಷಿತ ವಾತಾವರಣದ ಅಗತ್ಯತೆ ಕೋರಿದೆ. ನಾವು ಶಾಂತಿಯುತವಾಗಿ ಪ್ರತಿಭಟನೆ ಮಾಡಿದ್ದೇವೆ. ಇಂತಹ ಘಟನೆಗಳು ಮರುಕಳಿಸದಂತೆ ಕಠಿಣ ಕ್ರಮ ಕೈಗೊಳ್ಳಬೇಕು, ಛಾಯಾಗ್ರಾಹಕರಿಗೆ ಸುರಕ್ಷಿತವಾಗಿ ಕೆಲಸ ಮಾಡಲು ಅನುಕೂಲಕರ ವಾತಾವರಣ ಕಲ್ಪಿಸಬೇಕು, ಸಂಬಂಧಿತ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕು ಹಾಗೂ ಶೂಟಿಂಗ್ ಸ್ಥಳಗಳಲ್ಲಿ ಸ್ಪಷ್ಟ ಮಾರ್ಗಸೂಚಿ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಈ ಬಗ್ಗೆ ತಕ್ಷಣ ಕ್ರಮ ಕೈಗೊಳ್ಳದಿದ್ದಲ್ಲಿ ಮುಂದಿನ ದಿನಗಳಲ್ಲಿ ಹೋರಾಟ ತೀವ್ರಗೊಳಿಸುವ ಎಚ್ಚರಿಕೆ ನೀಡಿದರು. ಛಾಯಗ್ರಾಹಕರ ಸಂಘದ ಜಿಲ್ಲಾಧ್ಯಕ್ಷ ಎಸ್.ನಿಂಗರಾಜು, (ಸ್ವಾಮಿ) ಮಾತನಾಡಿ, ಬೆಟ್ಟದ ಭೈರವೇಶ್ವರ ದೇವಸ್ಥಾನದ ಆವಣದಲ್ಲಿ ಪ್ರೀ-ವೆಡ್ಡಿಂಗ್ ಶೂಟ್ ವೇಳೆ ಸ್ಥಳೀಯರು ತೋರಿದ ಗೂಂಡಾವರ್ತನೆ, ಹಲ್ಲೆ ದೃಶ್ಯ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿವೆ.

ಘಟನೆಯಿಂದ ಛಾಯಾಗ್ರಾಹಕರಿಗೆ ಆರ್ಥಿಕವಾಗಿ ಭಾರೀ ನಷ್ಟವಾಗಿದ್ದು, ವೃತ್ತಿಪರ ಬದುಕಿನ ಮೇಲೆ ದುಷ್ಪರಿಣಾಮ ಬೀರಿದೆ ಎಂದರು.

ವೃತ್ತಿಪರ ಛಾಯಾಗ್ರಾಹಕರು ತಮ್ಮ ಜೀವನೋಪಾಯಕ್ಕಾಗಿ ಶ್ರಮಿಸುತ್ತಿರುವ ಸಂದರ್ಭದಲ್ಲಿ ಇಂತಹ ಹಲ್ಲೆಗಳು ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆ. ಇನ್ನೆಂದೂ ಹೀಗೆ ನಡೆಯಬಾರದು. ಇಂತಹ ಘಟನೆ ಮುಂದುವರಿದರೆ ಛಾಯಾಗ್ರಹಣ ವೃತ್ತಿಯ ಭದ್ರತೆ ಪ್ರಶ್ನಾರ್ಹವಾಗಲಿದೆ ಎಂದರು.

### ಸಂಘದ ಪ್ರಮುಖ ಬೇಡಿಕೆ

ಹಲ್ಲೆ ನಡೆಸಿದ ಆರೋಪಿಗಳಿಗೆ ತಕ್ಷಣ ಕಠಿಣ ಶಿಕ್ಷೆ ವಿಧಿಸಬೇಕು, ಹಾನಿಗೊಳಗಾದ ಛಾಯಾಗ್ರಾಹಕರಿಗೆ ಸಮರ್ಪಕ ಪರಿಹಾರವನ್ನು ಸರ್ಕಾರ ಘೋಷಿಸಬೇಕು. ವೃತ್ತಿಪರ ಛಾಯಾಗ್ರಾಹಕರಿಗೆ ಸೂಕ್ತ ರಕ್ಷಣೆ ನೀಡುವಂತೆ ಕ್ರಮ ಕೈಗೊಳ್ಳಬೇಕು. ಪ್ರಕರಣ ಸಂಬಂಧ ಸಂಬಂಧಿತ ಅಧಿಕಾರಿಗಳು ನ್ಯಾಯಸಮ್ಮತ ಹಾಗೂ ತ್ವರಿತ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಅಪರ ಜಿಲ್ಲಾಧಿಕಾರಿ ಜಗದೀಶ್ ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಹೋರಾಟದಲ್ಲಿ ಕೆಪಿಎ ಕಾರ್ಯದರ್ಶಿ ಟಿ.ಸಿ. ನಾಗರಾಜು, ಪ್ರಧಾನ ಕಾರ್ಯದರ್ಶಿ ಬಿ.ಕೆ. ಧರ್ಮಶೆಟ್ಟಿ, ತಾಲೂಕು ಅಧ್ಯಕ್ಷ ಎಸ್.ಜಿ. ನಾಗರಾಜು ಮೊದಲಾದವರಿದ್ದರು.

# ಇಂದು ಗರ್ಭ ಕೊರಳ ಕ್ಯಾನ್ಸರ್ ಅರಿವು ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಸಾಲಗಾಮೆ ರಸ್ತೆಯಲ್ಲಿರುವ ಭಾರತೀಯ ರೆಡ್ ಕ್ರಾಸ್ ಕಚೇರಿಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಮಹಿಳಾ ಪೌರ ಕಾರ್ಮಿಕರಿಗೆ ಗರ್ಭ ಕೊರಳ ಹಾಗೂ ಸ್ತನ ಕ್ಯಾನ್ಸರ್ ತಪಾಸಣೆ ಹಾಗು ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬೆಳಿಗ್ಗೆ 10 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದೆ. ಮಹಾನಗರ ಪಾಲಿಕೆ, ಭಾರತ ಸೇವಾದಳ, ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ಸಂಘ, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಲ್ಲಾ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟ ಹಾಗು ನವಚೇತನ ಚಾರಿಟಬಲ್ ಟ್ರಸ್ಟ್ ಅಂಡ್ ಫೌಂಡೇಶನ್ ವತಿಯಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮಹಾನಗರ ಪಾಲಿಕೆಯ ಎಲ್ಲಾ ಪೌರ ಕಾರ್ಮಿಕ ಮಹಿಳೆಯರು ಪ್ರಯೋಜನ ಪಡೆಯಬೇಕೆಂದು ಭಾರತ ಸೇವಾ ದಳದ ಜಿಲ್ಲಾ ಕಾರ್ಯದರ್ಶಿ ಗಿರೀಶ್ ಚನ್ನವೀರಪ್ಪ ಕೋರಿದ್ದಾರೆ.

# ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹಿಳೆಯರು ಸ್ವ-ಉದ್ಯೋಗದ ಮೂಲಕ ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವತ್ತ ಗಮನ ಹರಿಸಬೇಕೆಂದು ಜನನಿ ಫೌಂಡೇಶನ್ ಅಧ್ಯಕ್ಷೆ ಭಾನುಮತಿ ಹೇಳಿದರು.

ನಗರದ ಹೊರವಲಯದಲ್ಲಿರುವ ದೊಡ್ಡಕೊಂಡಗೊಳ ಸಮುದಾಯ ಭವನದಲ್ಲಿ ಜನನಿ ಫೌಂಡೇಶನ್ ವತಿಯಿಂದ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ಪುರುಷ ಪ್ರಧಾನ ಸಮಾಜದಲ್ಲಿ ಮಹಿಳೆಯರು ತಮ್ಮದೇಯಾ ಸಾಧನೆ ಮೂಲಕ ತಾನು ಯಾರಿಗೂ ಕಡಿಮೆ ಇಲ್ಲ ಎಂಬುದನ್ನು ಸಾಬೀತುಪಡಿಸಿದ್ದಾಳೆ. ಶಿಕ್ಷಣ, ಆರೋಗ್ಯ, ರಾಜಕೀಯ, ವಿಜ್ಞಾನ, ಸಾಹಿತ್ಯ ಹೀಗೆ ಎಲ್ಲಾ ಕ್ಷೇತ್ರಗಳಲ್ಲಿ ಗುರುತರ ಛಾಪು ಮೂಡಿಸುತ್ತಿದ್ದಾಳೆ. ಆದರೆ ಗ್ರಾಮೀಣ ಭಾಗದ ಮಹಿಳೆಯರಲ್ಲಿ ಹಿಂಜರಿಕೆ ಇನ್ನೂ ಇದೆ ಎಂದರು.

ದುಡಿಮೆ ಮತ್ತು ಶಿಕ್ಷಣ ಮಹಿಳೆಯರಿಗೆ ಜ್ಞಾನ, ಸ್ವಾತಂತ್ರ್ಯ, ಧೈರ್ಯವನ್ನು ನೀಡುತ್ತದೆ. ಆದ್ದರಿಂದ ಮಹಿಳೆಯರು ಶಿಕ್ಷಣ ಪಡೆದು ಸಬಲೀಕರಣದತ್ತ ಮುಖ ಮಾಡಬೇಕು. ಸಮಾಜದಲ್ಲಿ ಯಾರು ಮೇಲು, ಕೀಳಲ್ಲ. ಮಹಿಳೆಯರಿಗೂ ಸಮಾನ ಅವಕಾಶ ಗೌರವ ಸ್ಥಾನ ದೊರಕಬೇಕೆಂದರು.

ಜನನಿ ಫೌಂಡೇಶನ್‌ನ ಸಾವಿತ್ರಿ, ಚೈತ್ರ, ವಿನುತಾ, ಸಿಂಚನ, ವಿಜಯಲಕ್ಷ್ಮಿ, ಹೇಮಲತಾ, ಸುಂದರಮ್ಮ, ಬಬಿತಾ, ಹರಿಣಿ, ಯಶೋಧ, ರತ್ನ ಇತರರಿದ್ದರು.

# ಜೈನ ಸಮಾಜದಿಂದ ಮಹಾವೀರ ಜಯಂತಿ ಆಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪಟ್ಟಣದಲ್ಲಿ ಮಂಗಳವಾರ ಜೈನ ಸಮಾಜದ ವತಿಯಿಂದ ಭಗವಾನ್ ಮಹಾವೀರರ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಪಟ್ಟಣದ ಅಶೋಕ ರಸ್ತೆಯಲ್ಲಿರುವ ಜೈನ ಸಮಾಜದ ಭಗವಾನ್ ಕುಂಥುನಾಥ್ ದೇವಸ್ಥಾನದಿಂದ ಮಹಾವೀರರ ಭಾವಚಿತ್ರವನ್ನು ತೆರೆದ ವಾಹನದಲ್ಲಿ ಪ್ರತಿಷ್ಠಾಪಿಸಿ, ವಾದ್ಯ ವೃಂದದೊಂದಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ನಡೆಸಲಾಯಿತು.

ಮೆರವಣಿಗೆಯಲ್ಲಿ ಸಮಾಜದ ಸದಸ್ಯರು, ಮಹಿಳೆಯರು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಭಗವಾನ್ ಮಹಾವೀರರ



ಸಂದೇಶಗಳನ್ನು ಸಾರುವ ಘೋಷಣೆಗಳನ್ನು ಕೂಗಿದರು.

ಶಾಸಕ ಸಿಮೆಂಟ್ ಮಂಜು ಮೆರವಣಿಗೆಯಲ್ಲಿ ಭಾಗವಹಿಸಿ ಶುಭಾಶಯ ತಿಳಿಸಿದರು.

ಸಮಾಜದ ಅಧ್ಯಕ್ಷ ಸಂತೋಷ್ ಕುಮಾರ್ ಜೈನ್ ಮಾತನಾಡಿ, ಭಗವಾನ್ ಮಹಾವೀರರು ನೀಡಿದ ಅಹಿಂಸೆ, ಸತ್ಯ, ಧರ್ಮ ಮತ್ತು ಸಹಿಷ್ಣುತೆ ಎಂಬ ಮೌಲ್ಯಗಳು ಇಂದಿನ ಸಮಾಜಕ್ಕೆ ಅತ್ಯಂತ ಅತ್ಯವಶ್ಯವಾಗಿದೆ. ಅವರ ಉಪದೇಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಜೈನ ಸಮಾಜದ ದಿನೇಶ್,ವಿಜಯ್ ಕುಮಾರ್, ಪೃಥ್ವಿರಾಜ್, ಭರತ್, ಸ್ವಸ್ತಿಕ್ ಕಮಲೇಶ್, ರಮೇಶ್, ಸುರೇಶ್ ಹಾಜರಿದ್ದರು.

# ಎ. 3 ರಿಂದ 5ರ ವರೆಗೆ ಆದಿಹಳ್ಳಿ ಆದಿಲಕ್ಷ್ಮ ಅಮ್ಮ ಜಾತ್ರೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ತಾಲ್ಲೂಕಿನ ಗಂಡಸಿ ಹೋಬಳಿ ಆದಿಹಳ್ಳಿಯ ಶ್ರೀ ಆದಿಲಕ್ಷ್ಮ ಅಮ್ಮನವರ ಜಾತ್ರಾ ಮಹೋತ್ಸವ ಎ. 3 ರಿಂದ 5ರ ವರೆಗೆ ನಡೆಯಲಿದೆ ಎಂದು ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ ಹೇಳಿದರು.

ಆದಿಹಳ್ಳಿ ಶಾಖಾ ಮಠದಲ್ಲಿ ಜಾತ್ರಾ ಸಿದ್ಧತೆ ಪರಿಶೀಲಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆದಿಹಳ್ಳಿ ಸೇರಿ ಸುತ್ತಲಿನ ಏಳು ಹಳ್ಳಿಗಳ ಗ್ರಾಮಸ್ಥರು ಪೂರ್ವಿಕರ ಕಾಲದಿಂದ ಭಕ್ತಿ, ಶ್ರದ್ಧೆ ಮತ್ತು ನಂಬಿಕೆಯಿಂದ ಜಾತ್ರೆ ನಡೆಸಿಕೊಂಡು ಬಂದಿದ್ದಾರೆ. ಗಂಡಸಿ, ಬಾಗೇಶಪುರ ಹಾಗೂ ಸುತ್ತಲಿನ ಗ್ರಾಮಗಳ ಭಕ್ತರು ಜಾತ್ರೆಯಲ್ಲಿ ಭಾಗವಹಿಸುತ್ತಾರೆ. ಕ್ಷೇತ್ರದ ಜಾತ್ರೆ ಮುಗಿದ ಬಳಿಕವೇ ಅನೇಕ ಗ್ರಾಮಗಳಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಪ್ರಾರಂಭವಾಗುವ ಪರಂಪರೆ ಇದೆ ಎಂದರು.

ಎ. 3ರಂದು ಜಾತ್ರಾ ಮಹೋತ್ಸವಕ್ಕೆ ಚಾಲನೆ ದೊರೆಯಲಿದೆ. ಅಂದು ಬೆಳಿಗ್ಗೆ ಪುಣ್ಯಾಹ, ರುದ್ರಾಭಿಷೇಕ, ವಿಶೇಷ ಪೂಜೆ ಸೇರಿ ಹಲವು ಧಾರ್ಮಿಕ ವಿಧಿವಿಧಾನಗಳು ನೆರವೇರಲಿವೆ. ಬಳಿಕ ಭಕ್ತಾಧಿಗಳಿಗೆ ಪ್ರಸಾದ ವಿನಿಯೋಗ ಮಾಡಲಾಗುವುದು. ಅದೇ ದಿನ ಸಂಜೆ ಗ್ರಾಮಸ್ಥರು ಸಂಪ್ರದಾಯದಂತೆ ಬಾಯಿಗೆ ಬೀಗ ಹಾಕಿಸಿಕೊಂಡು ಹರಕೆ ಸಲ್ಲಿಸುವ ವಿಶೇಷ ಆಚರಣೆ ನಡೆಯಲಿದ್ದು, ಇದು ಜಾತ್ರೆಯ ವಿಶಿಷ್ಟ ಆಕರ್ಷಣೆಯಾಗಿ ಗುರುತಿಸಿಕೊಂಡಿದೆ ಎಂದರು.

ಎ. 4ರಂದು ಮುಂಜಾನೆ ಬ್ರಾಹ್ಮಿ ಮುಹೂರ್ತದಲ್ಲಿ ಕೆಂಡೋತ್ಸವ ನಡೆಯಲಿದ್ದು, ಭಕ್ತರ ನಂಬಿಕೆ ಮತ್ತು ಹರಕೆಯ ಪ್ರತೀಕವಾಗಿರುವ ಈ ಆಚರಣೆ ವಿಶೇಷ ಭಕ್ತಿಭಾವದಿಂದ ನೆರವೇರಲಿದೆ. ಸಂಪ್ರದಾಯದಂತೆ ಎಡೆ ಸೇವೆ ಕೂಡ ನಡೆಯಲಿದೆ. ದೇವಿಯ ಕಳಸವನ್ನು 8 ವರ್ಷದ ಒಳಗಿನ ಹೆಣ್ಣು ಮಗು ಹೊರುವ ಸಂಪ್ರದಾಯವಿದ್ದು ಕೆಂಡೋತ್ಸವದಲ್ಲಿ ಪಾಲ್ಗೊಳ್ಳುವುದು ದೇವಿಯ ಮಹಿಮೆಯಾಗಿದೆ ಎಂದರು.



## 139ನೇ ಹುಣ್ಣಿಮೆ ಕಾರ್ಯಕ್ರಮ

ಅದೇ ದಿನ ಸಂಜೆ 5 ಗಂಟೆಗೆ ಬ್ರಹ್ಮ ರಥೋತ್ಸವ ಜರುಗಲಿದ್ದು, ಭಕ್ತರು ದೇವಿಯ ದರ್ಶನಕ್ಕಾಗಿ ದೊಡ್ಡ ಸಂಖ್ಯೆಯಲ್ಲಿ ಆಗಮಿಸುವ ನಿರೀಕ್ಷೆಯಿದೆ. ಸಂಜೆ 6 ಗಂಟೆಗೆ ಧಾರ್ಮಿಕ ಸಮಾರಂಭ ಆಯೋಜಿಸಲ್ಪಟ್ಟಿದ್ದು, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಆಶೀರ್ವಚನ ನೀಡಲಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ 139ನೇ ಗುರು ತೋರಿದ ದಾರಿ ತಿಂಗಳ ಮಾಮನ ತೇರು ಪವಿತ್ರ ಹುಣ್ಣಿಮೆ ಕಾರ್ಯಕ್ರಮ ಸಹ ನೆರವೇರಲಿದೆ. ಈ ಕ್ಷೇತ್ರದಲ್ಲಿ ಪ್ರತಿ ತಿಂಗಳು ನಡೆಯುವ ಹುಣ್ಣಿಮೆ ಕಾರ್ಯಕ್ರಮಕ್ಕೆ ಆಧ್ಯಾತ್ಮಿಕ ಮಹತ್ವವಿದೆ ಎಂದು ತಿಳಿಸಿದರು.

ಎ. 5ರಂದು ಜಾತ್ರೆಯ ಪ್ರಮುಖ ಆಕರ್ಷಣೆಯಾಗಿರುವ ಸಿಡಿ ಉತ್ಸವ ಮತ್ತು ಮಹಾರಥೋತ್ಸವ ವಿಜೃಂಭಣೆಯಿಂದ ನಡೆಯಲಿದೆ. ರಥೋತ್ಸವದಲ್ಲಿ ದೇವಿಯ ಉತ್ಸವ ಮೂರ್ತಿಯನ್ನು ಭಕ್ತರ ಜಯಘೋಷದ ನಡುವೆ ರಥದಲ್ಲಿ ವೀಕ್ಷಣೆಗೆ ಕರೆತರಲಾಗುತ್ತದೆ. ಬಳಿಕ ಪ್ರಸಾದ ವಿನಿಯೋಗದೊಂದಿಗೆ ಜಾತ್ರಾ ಮಹೋತ್ಸವ ಸಂಪನ್ನಗೊಳ್ಳಲಿದೆಯೆಂದರು.

ಜಾತ್ರಾ ಮಹೋತ್ಸವದಲ್ಲಿ ಚನ್ನರಾಯಪಟ್ಟಣದ ಶ್ರೀ ಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಸ್ವಯಂ ಸೇವಕರು ಸೇವಾ ಕಾರ್ಯದಲ್ಲಿ ತೊಡಗಿಸಿಕೊಳ್ಳಲಿದ್ದು, ಭಕ್ತರಿಗೆ ಮಾರ್ಗದರ್ಶನ, ವ್ಯವಸ್ಥೆ ಮತ್ತು ಶಿಸ್ತು ಪಾಲನೆಯಲ್ಲಿ ಸಹಕರಿಸಲಿದ್ದಾರೆಂದು ಮಾಹಿತಿ ನೀಡಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಹಾಜರಿದ್ದರು.

# ಕಾರ್ಯಕರ್ತರೇ ಜೆಡಿಎಸ್ ಶಕ್ತಿ: ಶಾಸಕ ಬಾಲಕೃಷ್ಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಜೆಡಿಎಸ್‌ಗೆ ಕಾರ್ಯಕರ್ತರೇ ಶಕ್ತಿಯಾಗಿದ್ದು ಅವರ ಬೆಂಬಲದಿಂದಲೇ ಪಕ್ಷ ಸದೃಢವಾಗಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಮುದ್ದಾಪುರ ಗ್ರಾಮದಲ್ಲಿ 15ಕ್ಕೂ ಹೆಚ್ಚು ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರ ಜೆಡಿಎಸ್ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯ ಮತ್ತು ಜಿಲ್ಲೆ ತಾಲೂಕಿನಲ್ಲಿ ಜೆಡಿಎಸ್ ಪಕ್ಷ ಮಾಜಿ ಪ್ರಧಾನಿಗಳಾದ ಎಚ್.ಡಿ.ದೇವೇಗೌಡರು, ಮಾಜಿ ಮುಖ್ಯಮಂತ್ರಿಗಳು ಹಾಲಿ ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ ಅವರು. ಮಾಜಿ ಸಚಿವರಾದ ಎಚ್ .ಡಿ.ರೇವಣ್ಣನವರ ನಾಯಕತ್ವದಲ್ಲಿ ಪಕ್ಷದ ಕಾರ್ಯಕರ್ತರ ಹೆಚ್ಚಿನ ಪರಿಶ್ರಮದಿಂದ ಪಕ್ಷ ಹೆಚ್ಚು ಸದೃಢವಾಗಿದೆ ಎಂದು ತಿಳಿಸಿದರು.

ಮುದ್ದಾಪುರ ಗ್ರಾಮದ 15 ಕ್ಕೂ ಹೆಚ್ಚು ಕಾಂಗ್ರೆಸ್ ಕಾರ್ಯಕರ್ತರು ಮತ್ತು ಮುಖಂಡರು ತಾಲೂಕಿನಲ್ಲಿ ನನ್ನ ಅಭಿವೃದ್ಧಿ ಕೆಲಸಗಳನ್ನು ಮೆಚ್ಚಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡಿದ್ದಾರೆ ಈ ಹಿಂದೆಯೂ ಮುದ್ದಾಪುರ ಗ್ರಾಮದಲ್ಲಿ ಕಾಂಕ್ರೀಟ್ ರಸ್ತೆ ಒಳಚರಂಡಿ ವ್ಯವಸ್ಥೆ ಸೇರಿದಂತೆ ಹಲವು ಅಭಿವೃದ್ಧಿ ಕೆಲಸಗಳಿಗೆ ಹೆಚ್ಚಿನ ಅನುದಾನ ನೀಡಲಾಗಿದೆ ಮುಂಬರುವ ದಿನಗಳಲ್ಲೂ ಗ್ರಾಮದ ಅಭಿವೃದ್ಧಿಗೆ ಶ್ರಮಿಸುವುದಾಗಿ ಭರವಸೆ ನೀಡಿದರು.



ಉಪ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿಗಳ ಗೆಲುವು ನಿಶ್ಚಿತವಾಗಿದೆ ರಾಜ್ಯದಲ್ಲಿ ಬದಲಾವಣೆ ತರುವ ನಿಟ್ಟಿನಲ್ಲಿ ಈ ಉಪಚುನಾವಣೆ ಹೆಚ್ಚು ಮಹತ್ವ ಪಡೆದಿದ್ದು ಬಿಜೆಪಿ ಅಭ್ಯರ್ಥಿಗಳ ಗೆಲುವಿಗೆ ಜೆಡಿಎಸ್ ಪಕ್ಷದ ಕಾರ್ಯಕರ್ತರು ಮುಖಂಡರು ಹೆಚ್ಚು ಶ್ರಮಿಸಲಿದ್ದಾರೆ.

ಅವರ ಗೆಲುವು ನಿಶ್ಚಿತವಾಗಿದೆ ಮುಂಬರುವ ಎಲ್ಲಾ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ತಾಲೂಕಿನಲ್ಲಿ ಜೆಡಿಎಸ್ ಪಕ್ಷದ ಅಭ್ಯರ್ಥಿಗಳು ಹೆಚ್ಚಿನ ಸ್ಥಾನಗಳಲ್ಲಿ ಜಯಗಳಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡರಾದ ಸಂತೋಷ್, ಶಶಿ, ನವೀನ್, ಶ್ರೀನಿವಾಸ್, ವಾಸು, ಪ್ರಕಾಶ್, ಹರೀಶ್, ಪ್ರಸನ್ನ, ಶೇಖರಪ್ಪ, ಶರತ್, ಶಶಿಧರ್ ಇತರರು ಪಕ್ಷವನ್ನು ತೊರೆದು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

# ಮೋಕ್ಷದ ದಾರಿ ಹುಡುಕಿದ ಮಹಾವೀರ ಶ್ರೇಷ್ಠ ದಾರ್ಶನಿಕ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಜೈನ ಧರ್ಮದ 24ನೇ ಮತ್ತು ಅಂತಿಮ ತೀರ್ಥಂಕರ ಭಗವಾನ್ ಮಹಾವೀರರು 30ನೇ ವಯಸ್ಸಿನಲ್ಲಿ ತಮ್ಮ ಲೌಕಿಕ ಸುಖವನ್ನು ತ್ಯಜಿಸಿ ಜೀವನದ ಸತ್ಯ ದಾರಿಯ ಹುಡುಕಾಟದಲ್ಲಿ ಸಾಗಿದ ಮಹಾನ್ ದಾರ್ಶನಿಕ ವ್ಯಕ್ತಿ ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ಪಟ್ಟಣದ ಮಿನಿ ವಿಧಾನ ಸೌಧದಲ್ಲಿ ಆಯೋಜಿಸಿದ್ದ ಭಗವಾನ್ ಮಹಾವೀರರ 2625ನೇ ಜಯಂತ್ಯುತ್ಸವ ಸಮಾರಂಭದಲ್ಲಿ ಮಾತನಾಡಿ, 12 ವರ್ಷಗಳ ಕಾಲ ತಮ್ಮ ಇಂದ್ರಿಯಗಳನ್ನು ಹಿಡಿತದಲ್ಲಿಟ್ಟುಕೊಂಡಿದ್ದ ಮಹಾವೀರರು ಅಹಿಂಸೆ, ಸತ್ಯ, ಆಸ್ತೇಯ, ಬ್ರಹ್ಮಚರ ಮತ್ತು ಅಪರಿಗ್ರಹ ಎಂಬ 5 ಪ್ರಮುಖ ತತ್ವಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದರು.

ಹಾಗಾಗಿ ಇಂದಿಗೂ ಕೂಡ ಜೈನ ಸಮುದಾಯ ಪ್ರಾಣಿ ಹಿಂಸೆ, ಅಸತ್ಯ, ಸುಳ್ಳು, ಮೋಸ, ಕಳ್ಳತನ ಸುಲಿಗೆಯನ್ನು ಸಹಿಸುವುದಿಲ್ಲ. ಲೌಕಿಕವಾದ ಸಂಬಂಧಗಳಿಗೆ ಭಾವನಾತ್ಮಕ ಸಂಬಂಧ ಬೆಳೆಸಿಕೊಂಡರೆ ಮೋಕ್ಷ ಸಿಗುವುದಿಲ್ಲ ಎಂದು ಪ್ರತಿಪಾದಿಸುತ್ತದೆ.

ಜೈನ ಸಮುದಾಯದ ಪ್ರತಿಯೊಬ್ಬರೂ ಕೂಡ ಕಷ್ಟಪಟ್ಟು ದುಡಿಯುವ ಶ್ರಮಿಕರು. ದೇಶದ ಆರ್ಥಿಕತೆಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ.

ಭಗವಾನ್ ಮಹಾವೀರರ ಬೋಧನೆ ಹಾಗೂ ತತ್ವಗಳನ್ನು ಪಾಲಿಸಿದರೆ ಸದೃಢ ರಾಷ್ಟ್ರವನ್ನು ಕಾಣಬಹುದಾಗಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಜೈನ ಸಮಾಜದ ಶ್ರೇಯೋಭಿವೃದ್ಧಿಗೆ ಪೂರಕವಾಗಿ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೊಳಿಸುತ್ತಿರುವುದು ಸಂತಸದ ವಿಚಾರ. ಭಗವಾನ್ ಮಹಾವೀರರ ತತ್ವ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

# ಡಬ್ಬಿಂಗ್ ಆರಂಭಿಸಿದ ಪುಟ್ಟಗೂಡಿನ ಪಟ್ಟದರಸಿ ಸಿನಿಮಾ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸಾಹಿತಿ ಕೊಟ್ರೇಶ್‌ಎಸ್. ಉಪ್ಪಾರ್ ಅವರ ಕಾದಂಬರಿ ಆಧಾರಿತ ಮಕ್ಕಳ ಕನ್ನಡಚಿತ್ರ ಅಪುಟ್ಟಗೂಡಿನ ಪಟ್ಟದರಸಿಬ ಚಿತ್ರೀಕರಣ ಪೂರ್ಣಗೊಂಡು ಇದೀಗ ಪೋಸ್ಟ್ ಪ್ರೊಡಕ್ಷನ್ ಹಂತಕ್ಕೆ ಪ್ರವೇಶಿಸಿದೆ.

ಹಾಸನದ ಉದಯಗಿರಿಯ ನಾದ ವೈಭವ ಸ್ಟುಡಿಯೋದಲ್ಲಿ ಚಿತ್ರದ ಡಬ್ಬಿಂಗ್ ಕಾರ್ಯ ಆರಂಭಗೊಂಡಿದ್ದು, ಚಿತ್ರತಂಡದಲ್ಲಿ ಹೊಸ ಉತ್ಸಾಹ ಮೂಡಿಸಿದೆ.

ಸಕಲೇಶಪುರ ತಾಲ್ಲೂಕಿನ ಅರುಣ್ ಗೌಡ ಅವರು ನಿರ್ದೇಶನ ಮಾಡಿರುವ ಈ ಚಿತ್ರವು ಆಲೂರು, ತಾಳೂರು ಹಾಗೂ ಬೇಲೂರು ಭಾಗಗಳಲ್ಲಿ ಚಿತ್ರೀಕರಣಗೊಂಡಿದೆ. ಸ್ಥಳೀಯ ವಿದ್ಯಾರ್ಥಿಗಳು ಮತ್ತು ಕಲಾವಿದರು ಅಭಿನಯಿಸಿರುವುದರಿಂದ ಚಿತ್ರಕ್ಕೆ ನೈಜತೆಯ ಸ್ಪರ್ಶ ಹೆಚ್ಚಾಗಿದೆ.

ಚಿತ್ರದ ನಿರ್ಮಾಣವನ್ನು ಸಕಲೇಶಪುರ ಮೂಲದ ಉದ್ಯಮಿ ಹಾಗೂ ಜ್ಞಾನ ಸಮೃದ್ಧಿ ಚಾರಿಟೇಬಲ್ ಟ್ರಸ್ಟ್ ಸಂಸ್ಥಾಪಕ ಕಾಮನಹಳ್ಳಿ ತೀರ್ಥಾನಂದ ಅವರು ತಮ್ಮ ಕೀರ್ತಿ ಫಿಲಂಸ್ ಬ್ಯಾನರ್‌ನಡಿ ಕೈಗೊಂಡಿದ್ದಾರೆ. ಚಿತ್ರದ ತುಣುಕುಗಳನ್ನು ವೀಕ್ಷಿಸಿದ ನಿರ್ಮಾಪಕರು ಕಥೆಯ ನೈಜತೆ ಮತ್ತು ಮಕ್ಕಳ ಕಥಾ ವಸ್ತುವಿಗೆ ಮೆಚ್ಚಿ ಪೋಸ್ಟ್ ಪ್ರೊಡಕ್ಷನ್ ಕೆಲಸವನ್ನು ಪೂರ್ಣಗೊಳಿಸಲು ಮುಂದಾಗಿದ್ದಾರೆ.



ಪ್ರಸ್ತುತ ಪೋಷಕ ನಟರು ಹಾಗೂ ಇತರೆ ಕಲಾವಿದರ ಡಬ್ಬಿಂಗ್ ಕಾರ್ಯ ನಡೆಯುತ್ತಿದ್ದು, ಪೋಷಕ ನಟ ಸಿದ್ದು ಮಂಡ್ಯ, ಪೋಷಕ ನಟಿ ಪೂಜಾ ರಘುನಂದನ್ ಅವರಿಂದ ಡಬ್ಬಿಂಗ್ ಆರಂಭಿಸಲಾಗಿದೆ. ವಿದ್ಯಾರ್ಥಿ ಕಲಾವಿದರ ಪರೀಕ್ಷೆಗಳು ಮುಗಿದ ಬಳಿಕ ಅವರ ಡಬ್ಬಿಂಗ್ ಕಾರ್ಯ ಕೈಗೊಳ್ಳಲಾಗುವುದು ಎಂದು ಚಿತ್ರತಂಡ ತಿಳಿಸಿದೆ.

ಸುಮಾರು ಹತ್ತು ವರ್ಷಗಳ ಕಾಲ ಚಿತ್ರರಂಗದಲ್ಲಿ ಸಹಾಯಕ ನಿರ್ದೇಶಕರಾಗಿ ಅನುಭವ ಹೊಂದಿರುವ ನಿರ್ದೇಶಕ ಅರುಣ್‌ಗೌಡ, ತಮ್ಮ ಮೊದಲ ಪ್ರಯತ್ನದಲ್ಲೇ ಮಕ್ಕಳ ಮನಸ್ಸಿಗೆ ಹತ್ತಿರವಾಗುವ ನೈಜ ಕಥೆಯನ್ನು ತೆರೆಗೆ ತರುತ್ತಿದ್ದಾರೆ. ಪೋಸ್ಟ್ ಪ್ರೊಡಕ್ಷನ್ ಪೂರ್ಣಗೊಂಡ ನಂತರ ಮುಂದಿನ ನಾಲ್ಕು ತಿಂಗಳಲ್ಲಿ ಚಿತ್ರವನ್ನು ವಿವಿಧ ಚಿತ್ರೋತ್ಸವಗಳಿಗೆ ಕಳುಹಿಸಿ ಬಳಿಕ ಚಿತ್ರಮಂದಿರಗಳಲ್ಲಿ ಬಿಡುಗಡೆ ಮಾಡುವ ಯೋಜನೆ ಇದೆ.

ಚಿತ್ರಕ್ಕೆ ಅಮೇರಿಕಾದಲ್ಲಿ ನೆಲೆಸಿರುವ ರಾಮ್ ಪ್ರಸಾದ್ ಮೂರು ಹಾಡುಗಳಿಗೆ ಸಂಗೀತ ನೀಡಿದ್ದು, ಸಂಕಲನವನ್ನು ಪುನೀತ್ ಕುಶಾವರ ನಿರ್ವಹಿಸಿದ್ದಾರೆ. ವಿಜಯ ಹಾಸನ್ ಸಂಭಾಷಣೆ ಬರೆದಿದ್ದು, ಚಂದು ಛಾಯಾಗ್ರಹಣ ಮಾಡಿದ್ದಾರೆ. ಸಹ ನಿರ್ದೇಶಕರಾಗಿ ಶರತ್ ಬಾಬು ಹಾಗೂ ಅರ್ಜುನ್ ಕ್ಷತ್ರಿಯ ಕಾರ್ಯನಿರ್ವಹಿಸಿದ್ದು, ಅನಿಲ್ ಸಹಾಯಕನಾಗಿ ಕೆಲಸ ಮಾಡಿದ್ದಾರೆ.

ಚಿತ್ರದಲ್ಲಿ ಕುಮಾರಿ ಶರಣ್ಯ ಮುಖ್ಯ ಪಾತ್ರದಲ್ಲಿ ನಟಿಸಿದ್ದು, ಸಿದ್ದು ಮಂಡ್ಯ, ಪೂಜಾ ರಘುನಂದನ್, ಕಲಾವಿದರಾದ ಲತಾಮಣಿ ತುರುವೇಕೆರೆ, ಡಾ. ಹಸೀನಾ ಎಚ್. ಕೆ., ಅಂಬಿಕಾ, ಗ್ಯಾರಂಟಿ ರಾಮಣ್ಣ, ಆಲೂರು ತಾಲ್ಲೂಕಿನ ತಾಳೂರು ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ 20ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ವಿಶೇಷ ಪಾತ್ರದಲ್ಲಿ ಪಿ.ಜಿ.ಆರ್. ಸಿಂಧ್ಯಾ, ಆಲೂರು ಸಕಲೇಶಪುರ ಶಾಸಕ ಸಿಮೆಂಟ್ ಮಂಜುನಾಥ್ ಸೇರಿದಂತೆ ಅನೇಕರು ಅಭಿನಯಿಸಿದ್ದಾರೆ.

# ಜನಮನ ರಂಜಿಸಿದ ಜಾನಪದ ಸಂಭ್ರಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್


ಬೇಲೂರು: ತಾಲೂಕಿನ ಹಳೇಬೀಡು ಹೋಬಳಿಯ ಅಮ್ಮನ ಬ್ಯಾಡರಹಳ್ಳಿ ಗ್ರಾಮದಲ್ಲಿ ಶ್ರೀ ಕೊಲ್ಲಾಪುರದಮ್ಮ ಹಾಗೂ ಚಾಮುಂಡೇಶ್ವರಿ ಅಮ್ಮನವರ ಜಾತ್ರಾ ಮಹೋತ್ಸವ ಅಂಗವಾಗಿ ಆಯೋಜಿಸಿದ್ದ ಜಾನಪದ ಸಂಭ್ರಮ ಅದ್ದೂರಿಯಾಗಿ ನಡೆಯಿತು.

ಹಾಸನ ತಾಲೂಕು ಬೊಮ್ಮೇನಹಳ್ಳಿಯ ಚಾಮುಂಡೇಶ್ವರಿ ವಾಲ್ಮೀಕಿ ನಾಯಕ ಜನಾಂಗದ ಜಾನಪದ ಕಲಾಸಂಘ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಮತ್ತು ಹಾಸನ ಇವರ ಸಂಯುಕ್ತ ಆಶ್ರಯದಲ್ಲಿ ಜಾತ್ರಾ ಮಹೋತ್ಸವ ಹಾಗೂ ಜಾನಪದ ಸಂಭ್ರಮ ಹಮ್ಮಿಕೊಳ್ಳಲಾಗಿತ್ತು.



ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸ್ಥಳೀಯ ಶಾಸಕ ಹುಲ್ಲಹಳ್ಳಿ ಸುರೇಶ್ ಅವರು, ಜಾನಪದ ಕಲೆ, ಜಾನಪದ ಹಾಡುಗಾರಿಕೆ, ಸುಗಮ ಸಂಗೀತ, ಭರತ ನಾಟ್ಯ ಹಾಗೂ ಜಾನಪದ ನೃತ್ಯ, ಇನ್ನಿತರ ಪ್ರಕಾರಗಳು ಜಾತ್ರಾ ಮಹೋತ್ಸ ವದಲ್ಲಿ ಭಕ್ತಾದಿಗಳಿಗೆ ಜನ ಸಾಮಾನ್ಯರಿಗೆ ಮುದ ನೀಡುವ ಸಾಂಸ್ಕೃತಿಕ ಚಟುವಟಿಕೆಗಳಾಗಿವೆ ಎಂದರು.

# ಹಳೇಬೀಡಿನಲ್ಲಿ ಅರ್ಥಪೂರ್ಣ ಗುರುವಂದನೆ ಕಾರ್ಯಕ್ರಮ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಳೇಬೀಡು: ವಯೋ ನಿವೃತ್ತರಾದ ದೈಹಿಕ ಶಿಕ್ಷಣ ಶಿಕ್ಷಕ ಎಚ್.ಆರ್.ನಾಗರಾಜ್ ಅವರಿಗೆ ಮಂಗಳವಾರ ಕರ್ನಾಟಕ ಪಬ್ಲಿಕ್ ಶಾಲೆ ಆವರಣದಲ್ಲಿ ಶಿಷ್ಯರು ಹಾಗೂ ಅಭಿಮಾನಿಗಳಿಂದ ಗುರುವಂದನಾ ಕಾರ್ಯಕ್ರಮ ನಡೆಯಿತು.

ಅಡಗೂರು ಹಾಗೂ ಹಳೇಬೀಡಿನ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಗಳಲ್ಲಿ ಸುದೀರ್ಘ ಸೇವೆ ಸಲ್ಲಿಸಿದ ನಾಗರಾಜ್ ಅವರಿಗೆ ಅಭಿನಂದನೆಯ ಹೊಳೆ ಹರಿದುಬಂತು. ಕ್ರೀಡಾ ಸಾಧಕ ಶಿಷ್ಯರು, ಅಭಿಮಾನಿಗಳು, ಸ್ನೇಹಿತರು, ಸಹೋದ್ಯೋಗಿಗಳು ಬಿಡುವಿಲ್ಲದಂತೆ ನಾಗರಾಜು ಹಾಗೂ ಅವರ ಪತ್ನಿ ಅಂಬಿಕಾ ಅವರನ್ನು ಸನ್ಮಾನಿಸಿದರು.

ನಾಗರಾಜು ಅವರ ಆಸಕ್ತಿಯಿಂದ ಅಡಗೂರು ಶಾಲೆಯಲ್ಲಿ ಶತಮಾನೋತ್ಸವ ನಡೆಯಿತು. ಅಡಗೂರು ಹಾಗೂ ಹಳೇಬೀಡು ಶಾಲೆಯ ಮಕ್ಕಳಲ್ಲಿ ಕ್ರೀಡಾಸಾಕ್ತಿ ಬೆಳೆಸಿದರು. ಹೀಗಾಗಿ ಎರಡೂ ಶಾಲೆಯಲ್ಲಿಯ ಸಾಕಷ್ಟು ವಿದ್ಯಾರ್ಥಿಗಳು ರಾಷ್ಟ್ರಮಟ್ಟದ ಕ್ರೀಡಾ ಸಾಧಕರಾಗಿ ಹೊರ ಹೊಮ್ಮಿದರು. ದೈಹಿಕ ಶಿಕ್ಷಣ ಮಾತ್ರವಲ್ಲದೆ ಯೋಗದ ಮಹತ್ವವನ್ನು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿದ್ದರಿಂದ ಶಿಕ್ಷಣ ಮುಗಿಸಿದ ಸಾಕಷ್ಟು ವಿದ್ಯಾರ್ಥಿಗಳು ಯೋಗ ಕರಗತ ಮಾಡಿಕೊಂಡು ಆರೋಗ್ಯವಂತರಾಗಿದ್ದಾರೆ. ಹೀಗಾಗಿ ಅಡಗೂರು ಹಾಗೂ ಹಳೇಬೀಡು ಭಾಗದ ವಿವಿಧ ಊರಿನ ಹಳೇಯ ವಿದ್ಯಾರ್ಥಿಗಳು ಗುರುವಂದನೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಅಡಗೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಸ್.ಡಿ.ಎಂ.ಸಿ ಮಾಜಿ ಅಧ್ಯಕ್ಷ ಎ.ಎ.ಚಂದ್ರಪ್ರಭ ಮಾತನಾಡಿ, ನಾಗರಾಜು ಮೇಸ್ಟ್ರು ಎಸ್.ಡಿ.ಎಂಸಿ, ಪೋಷಕರು ಹಾಗೂ ಗ್ರಾಮಸ್ಥರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಶಾಲೆಯ ಚಟುವಟಿಕೆ ನಡೆಸುತ್ತಿದ್ದರು. ಮಕ್ಕಳಲ್ಲಿ ಕ್ರೀಡಾಸಕ್ತಿ ಬೆಳೆಸಿದ್ದರಿಂದ ಅಡಗೂರು ಮಕ್ಕಳು ರಾಷ್ಟ್ರಮಟ್ಟದ ಕ್ರೀಡೆಯಲ್ಲಿ ಭಾಗವಹಿಸಿ ಶಾಲೆ ಹಾಗೂ ಗ್ರಾಮಕ್ಕೆ ಹೆಸರು ತಂದಿದ್ದಾರೆ. ಗಿಡ ನೆಡುವುದರಿಂದ ಆಗುವ ಪ್ರಯೋಜನವನ್ನು ವಿದ್ಯಾರ್ಥಿಗಳಿಗೆ ತಿಳಿಸಿ ಪರಿಸರ ಕಾಳಜಿಯ ಮೂಡಿಸಿದ್ದಾರೆ.

ಎಸ್‌ಡಿಎಂಸಿ ಅಧ್ಯಕ್ಷ ಬಿ.ಎಸ್. ಸೋಮಶೇಖರ್ ಕಾರ್ಯಕ್ರಮ ಉದ್ಘಾಟಿಸಿದರು. ಉಪ ಪ್ರಾಂಶುಪಾಲ ಮೋಹನರಾಜ, ಮುಖ್ಯಶಿಕ್ಷಕ ಮಲ್ಲಿಕಾರ್ಜುನ, ಪತ್ರಕರ್ತರಾದ ಅನಿಲ್ ಕುಮಾರ್, ರಘುನಾಥ್, ಯೋಗ ಶಿಕ್ಷಕ ಚೇತನ್ ಗುರೂಜಿ, ಪ್ರಾಥಮಿಕ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ರಘು ಕುಮಾರ ಇದ್ದರು.

# ಸರ್ಕಾರಿ ವೈದ್ಯರ ಖಾಸಗಿ ಸೇವೆಗೆ ಭಾರೀ ಆಕ್ರೋಶ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಸರ್ಕಾರಿ ಆಸ್ಪತ್ರೆಯ ವೈದ್ಯರು ಖಾಸಗಿ ಆಸ್ಪತ್ರೆಯಲ್ಲಿ ಕೆಲಸ ಮಾಡುತ್ತಿರುವುದರಿಂದ ರೋಗಿಗಳಿಗೆ ತೊಂದರೆಯಾಗುತ್ತಿದೆ ಎಂದು ಕೆಡಿಪಿ ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಶಾಸಕ ಸಿ.ಎನ್. ಬಾಲಕೃಷ್ಣ ಅವರ ಅಧ್ಯಕ್ಷತೆಯಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಸದಸ್ಯರಾದ ಗುರುಪ್ರಸಾದ್, ಕಬ್ಬಾಳು ಮಹೇಶ್, ಮಧುಸೂದನ್ ಮಾತನಾಡಿ, ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರ ನಿರ್ಲಕ್ಷದಿಂದ ರೋಗಿಗಳು ಹೈರಾಣಾಗಿದ್ದು ವೈದ್ಯರು ಸರ್ಕಾರಿ ಆಸ್ಪತ್ರೆಯಲ್ಲಿ ಕೆಲಸ ಮಾಡಿ ಎಂದು ಹೇಳಿದರೆ ಖಾಸಗಿ ಆಸ್ಪತ್ರೆಯಲ್ಲಿ ಸುಲಿಗೆ ಮಾಡುತ್ತಿದ್ದಾರೆ. ರೋಗಿಗಳು ಸರ್ಕಾರಿ ಆಸ್ಪತ್ರೆಗೆ ಬಂದರೆ ಚಿಕಿತ್ಸೆ ನೀಡದೆ ಖಾಸಗಿ ಆಸ್ಪತ್ರೆಗೆ ಕಳುಹಿಸುವ ನರ್ಸ್‌ಗಳ ದಂಧೆ ಹೆಚ್ಚಾಗಿದೆ. ಈ ಬಗ್ಗೆ ಸಾಕಷ್ಟು ದೂರು ನೀಡಿದರು ಸಹ ತಾಲ್ಲೂಕು ವೈದ್ಯಾಧಿಕಾರಿಗಳು ಕ್ರಮ ವಹಿಸುತ್ತಿಲ್ಲ. ರೋಗಿಗಳಿಗೆ ಚಿಕಿತ್ಸೆ ನೀಡಲು ಆಗದೇ ಇದ್ದರೆ ಕೆಲಸದಿಂದ ಹೊರ ಹೋಗಲಿ ಅದನ್ನು ಬಿಟ್ಟು ರೋಗಿಗಳಿಗೆ ತೊಂದರೆ ನೀಡುವುದು ಸರಿಯಲ್ಲ ಎಂದು ಆರೋಪಿಸಿದರು.




ತಾಲೂಕು ವೈದ್ಯಾಧಿಕಾರಿ ಡಾ. ಯುವರಾಜ್ ಮಾತನಾಡಿ, ಸರ್ಕಾರದ ಆದೇಶದಂತೆ ಸರ್ಕಾರಿ ಆಸ್ಪತ್ರೆಯಲ್ಲಿ ಕೆಲಸ ನಿರ್ವಹಿಸಿದ ನಂತರ ಖಾಸಗಿ ಆಸ್ಪತ್ರೆಯಲ್ಲಿ ವೈದ್ಯರು ಕೆಲಸ ಮಾಡಬಹುದೆಂದು ಆದೇಶವಿದೆ. ಅದನ್ನ ಹೊರತುಪಡಿಸಿ ಉಲ್ಲಂಘನೆ ಮಾಡಿದ್ದರೆ ನಮಗೆ ದೂರು ನೀಡಿ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ನಂತರ ಕೆಡಿಪಿ ಸದಸ್ಯರು ರಾಗಿ ಖರೀದಿ ಕೇಂದ್ರದಲ್ಲಿ ಸಾಕಷ್ಟು ಅವ್ಯವಹಾರವಾಗಿದ್ದು ಮೂಲ ರೈತರಿಗೆ ರಾಗಿ ಬೆಂಬಲ ಬೆಲೆ ಸಿಗದೇ ದಲ್ಲಾಳಿಗಳು ದಾವಣಗೆರೆ ಚಿತ್ರದುರ್ಗ ಹುಳಿಯಾರ್ ಕಡೆಯಿಂದ ರಾಗಿಗಳನ್ನು ತಂದು ಇದರಲ್ಲಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಶಾಮೀಲು ಎದ್ದು ಕಾಣುತ್ತಿದೆ. ಈ ಬಗ್ಗೆ ಸಾಕಷ್ಟು ಬಾರಿ ತಿಳಿಸಿದರು ಕ್ರಮ ವಹಿಸಿಲ್ಲ. ಸಂಬಂಧಪಟ್ಟ ಅಧಿಕಾರಿಗಳು ಸಹ ಸಭೆಗೆ ಬರದೇ ಬೇಜವಾಬ್ದಾರಿ ವರ್ತನೆ ತೋರಿದ್ದಾರೆ, ತಾಲೂಕಿನಲ್ಲಿ ರಾಗಿ ಬೆಳೆಯುವ ಪ್ರದೇಶಕ್ಕಿಂತ ಹೆಚ್ಚಿನದಾಗಿ ಖರೀದಿ ಕೇಂದ್ರಕ್ಕೆ ನೀಡಿರುವುದು ಯಾವ ಮಾನದಂಡದ ಮೇಲೆ ಪರಿಗಣಿಸಲಾಗಿದೆ ಎಂಬುದನ್ನ ತಿಳಿಸಬೇಕು. ತಾಲೂಕಿನಲ್ಲಿ ಹೇಳುವವರು ಕೇಳುವವರು ಯಾರು ಇಲ್ಲದಂತಾಗಿದೆ ಅಧಿಕಾರಿಗಳಿಗೆ ಯಾವುದೇ ಭಯವಿಲ್ಲದಂತೆ ಕೆಲಸ ಮಾಡುತ್ತಿದ್ದು ಸಾಕಷ್ಟು ಬಾರಿ ಎಚ್ಚರಿಕೆ ನೀಡಿದರೂ ಸಹ ಬೇಜವಾಬ್ದಾರಿ ವರ್ತನೆ ತೋರುತ್ತಿದ್ದಾರೆ ಎಂದು ಆರೋಪಿಸಿದರು.

ಸಭೆಯಲ್ಲಿ ಶಾಸಕ ಸಿ.ಎನ್. ಬಾಲಕೃಷ್ಣ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಹರೀಶ್, ಡಿವೈಎಸ್‌ಪಿ ಕುಮಾರ್, ಶಿರಸ್ತೆದಾರ್ ಪವನ್‌ಕುಮಾರ್ ಮತ್ತಿತರಿದ್ದರು.

# ಇತಿಹಾಸದಲ್ಲಿ ಈ ದಿನ

## ಏಪ್ರಿಲ್-01

1935: ಭಾರತೀಯ ರಿಸರ್ವ್ ಬ್ಯಾಂಕ್ ಸ್ಥಾಪನೆಗೊಂಡಿತು.

1957: ಭಾರತದಲ್ಲಿ ಡೆಸಿಮಲ್ ವ್ಯವಸ್ಥೆ ಜಾರಿಗೆ ಬಂತು.

2001: ನೆದರ್ಲ್ಯಾಂಡ್ಸ್ ದೇಶವು ಸಮಲಿಂಗ ವಿವಾಹವನ್ನು ಕಾನೂನಾತ್ಮಕವಾಗಿ ಮಾನ್ಯತೆ ನೀಡಿದ ಪ್ರಥಮ ದೇಶವಾಯಿತು.

### ಜನನ

1878: **Satyendra Nath Bose** ಖ್ಯಾತ ಭಾರತೀಯ ಭೌತಶಾಸ್ತ್ರಜ್ಞರು

1932: **Debabrata Biswas**, ಪ್ರಸಿದ್ಧ ಗಾಯಕ

### ಮರಣ

2015: **M. F. Husain** ಖ್ಯಾತ ಚಿತ್ರಕಾರ

# ಎ.2 ರಿಂದ 6ರ ವರೆಗೆ ವಿಶೇಷ ರೈಲು ಸಂಚಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೆಂಗಳೂರು: ಗುಡ್ ಫ್ರೈಡೆ, ಈಸ್ಟರ್ ಹಬ್ಬದ ಪ್ರಯುಕ್ತ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ಕಡಿಮೆ ಮಾಡಲು ನೈರುತ್ಯ ರೈಲ್ವೆಯು ಯಶವಂತಪುರ, ಮಡಗಾಂವ್ ಮತ್ತು ಬೆಂಗಳೂರು ಕಂಟೋನ್ಮೆಂಟ್ ನಡುವೆ ವಿಶೇಷ ರೈಲುಗಳನ್ನು ಓಡಿಸಲು ನಿರ್ಧರಿಸಿದೆ ಎಂದು ಮೈಸೂರು ವಿಭಾಗದ ಹಿರಿಯ ವಾಣಿಜ್ಯ ವ್ಯವಸ್ಥಾಪಕ ಗಿರೀಶ ಧರ್ಮರಾಜ ಕಲಗೊಂಡ ತಿಳಿಸಿದ್ದಾರೆ.

ಈ ವಿಶೇಷ ರೈಲುಗಳು ಮಾರ್ಗಮಧ್ಯೆ ಕುಣಿಗಲ್, ಚನ್ನರಾಯಪಟ್ಟಣ, ಹಾಸನ, ಸಕಲೇಶಪುರ, ಸುಬ್ರಹ್ಮಣ್ಯ ರೋಡ್, ಕಬಕಪುತ್ತೂರು, ಬಂಟ್ವಾಳ, ಸುರತ್ಕಲ್, ಮೂಲ್ಕಿ, ಉಡುಪಿ, ಬಾರ್ಕೂರು, ಕುಂದಾಪುರ, ಬೈಂದೂರು, ಭಟ್ಕಳ, ಮುರುಡೇಶ್ವರ, ಹೊನ್ನಾವರ, ಕುಮಟಾ, ಗೋಕರ್ಣ ರೋಡ್, ಅಂಕೋಲಾ, ಕಾರವಾರ ಮತ್ತು ಕಾಣಕೋಣ ನಿಲ್ದಾಣಗಳಲ್ಲಿ ನಿಲ್ಲಲಿವೆ.

ರೈಲು ಸಂಖ್ಯೆ 06271 ಯಶವಂತಪುರಮಡಗಾಂವ್ ವಿಶೇಷ ಎಕ್ಸ್‌ಪ್ರೆಸ್ ಎ.2ರಂದು ರಾತ್ರಿ 11.55ಕ್ಕೆ ಯಶವಂತಪುರದಿಂದ ಹೊರಟು, ಎ.3ರಂದು ಸಂಜೆ 5.30ಕ್ಕೆ ಮಡಗಾಂವ್ ತಲುಪಲಿದೆ. ಹಿಂದಿರುಗುವ ಪ್ರಯಾಣದಲ್ಲಿ, ರೈಲು ಸಂಖ್ಯೆ 06272 ಮಡಗಾಂವ್ –ಬೆಂಗಳೂರು ಕಂಟೋನ್ಮೆಂಟ್ ವಿಶೇಷ ಎಕ್ಸ್‌ಪ್ರೆಸ್ ಎ. 5ರಂದು ಬೆಳಿಗ್ಗೆ 11ಕ್ಕೆ ಮಡಗಾಂವ್‌ನಿಂದ ಹೊರಟು ಎ.6ರಂದು ಬೆಳಗಿನ ಜಾವ 5.20ಕ್ಕೆ ಬೆಂಗಳೂರು ಕಂಟೋನ್ಮೆಂಟ್ ತಲುಪಲಿದೆ.

ಹಿಂದಿರುಗುವ ಪ್ರಯಾಣದಲ್ಲಿ ರೈಲು ಸಂಖ್ಯೆ 06272 ಯಶವಂತಪುರ ನಿಲ್ದಾಣದಲ್ಲಿ ನಿಲುಗಡೆ ಇರುವುದಿಲ್ಲ. ಎಂವಿಟಿ ಬೆಂಗಳೂರು ನಿಲ್ದಾಣದಲ್ಲಿ ರೈಲು ನಿಲ್ಲಲಿದೆ. ಈ ವಿಶೇಷ ರೈಲು ಒಟ್ಟು 19 ಬೋಗಿಗಳನ್ನು ಹೊಂದಿರಲಿದೆ. ಇದರಲ್ಲಿ 2 ಎಸಿ 2–ಟೈರ್, ಎರಡು ಎಸಿ 3–ಟೈರ್, 9 ಸ್ಲೀಪರ್ ಕ್ಲಾಸ್, 4 ಸಾಮಾನ್ಯ ದ್ವಿತೀಯ ದರ್ಜೆ ಹಾಗೂ 2 ಎರ್/ಡಿ ಬೋಗಿಗಳು ಇರಲಿವೆ ಎಂದು ಮಾಹಿತಿ ನೀಡಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248